ಪ್ರಜಾ ಭಾರತ

ಕನ್ನಡ ದಿನಪತ್ರಿಕೆ ಸತ್ಯದ ಪರ - ಪ್ರಜೆಗಳ ಧ್ವನಿ..!


ಆ "ದೆಹಲಿ ಮಂತ್ರಿಯನ್ನು" ಜೈಲಿಗಟ್ಟಿ: ಸಿದ್ದರಾಮಯ್ಯಗೆ ಕ್ಲೀನ್ ಚಿಟ್ ಬೆನ್ನಲ್ಲೇ ಹೆಚ್.ಡಿ.ಕೆ. ವಿರುದ್ಧ ಯತೀಂದ್ರ ಆಕ್ರೋಶ

ಸಂಪಾದಕ: ದಿನೇಶ್ ಬೆಳ್ಳಾವರ, ಮೊ: 94821 01707 Email. prajabharathanews@gmail.com ಸಹ ಸಂಪಾದಕ : ಬಿ.ಬಿ ಶಿವರಾಜು, ಮೊ: 98809 08468

Volume-01 Issue-59 HASSAN Date : 30.10.2026 FRIDAY Reg No.PRGI No. KNKAN/26/A6168 Page-02 Rs.1.00

ಸಂಪುಟ–01 ಸಂಚಿಕೆ–59 ಹಾಸನ ದಿನಾಂಕ: 30.10.2026 ಶುಕ್ರವಾರ ರಿ.ನಂ.PRGI No. KNKAN/26/A6168 ಪುಟ:02 ಬೆಲೆ:1.00ರೂ.

ರಾಜಘಟ್ಟ ಮತ್ತು ಗವೇನಹಳ್ಳಿಗೆ ಭೇಟಿ ನೀಡಿ ವೀಕ್ಷಣೆ



ಪ್ರಜಾ ಭಾರತ ವರದಿ

ಹಾಸನ: ಅಬಕಾರಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎಂ.ಶಿವಲಿಂಗೇಗೌಡ ಅವರು ಇಂದು ಮಹಾನಗರ ಪಾಲಿಕೆಯ ರಾಜಘಟ್ಟ ಮತ್ತು ಗವೇನಹಳ್ಳಿಗೆ ಭೇಟಿ ನೀಡಿ ವೀಕ್ಷಣೆ ನಡೆಸಿದರು.

ಹಾಸನ ನಗರ ಸಭೆ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೆ ಏರಿಕೆ ಸಂದರ್ಭದಲ್ಲಿ 185 ಕೋಟಿ ರೂ ಅನುದಾನವನ್ನು ಬಜೆಟ್‌ನಲ್ಲಿ ಮೀಸಲಿಡಲಾಗಿದ್ದು, ಈಗಾಗಲೇ ಕ್ರಿಯಾ ಯೋಜನೆ ತಯಾರಿಸಿ ಕಳುಹಿಸಲಾಗಿದ್ದು, ಸರಿಯಾದ ರೀತಿಯಲ್ಲಿ ತಯಾರಿಸಿ ನೀಡಿಲ್ಲ ಎಂದು ಅನುಮೋದನೆಯಾಗಿಲ್ಲ, ಈ ನಿಟ್ಟಿನಲ್ಲಿ ಖುದ್ದು ಭೇಟಿ ನೀಡಿ ಪರಿಶೀಲಿಸಿ ಕ್ರಿಯಾ ಯೋಜನೆ ಸಲ್ಲಿಸುವಂತೆ ಮಾನ್ಯ ಮುಖ್ಯಮಂತ್ರಿಯವರು ಆದೇಶಿಸಿರುತ್ತಾರೆ ಅದರಂತೆ ಇಂದು ಮಹಾನಗರ ಪಾಲಿಕೆಯ ರಾಜಘಟ್ಟ ಮತ್ತು ಗವೇನಹಳ್ಳಿಗೆ ಭೇಟಿ ನೀಡಲಾಗಿದೆ.

ಹಾಲಿ ಕ್ರಿಯಾ ಯೋಜನೆಯಲ್ಲಿ ಯಾವುದೇ ಬದಲಾವಣೆಗಳು ಇದ್ದರೇ ಸಾರ್ವಜನಿಕರು ತಿಳಿಸುವಂತೆ ಹೇಳಿದರಲ್ಲದೆ, ಹೆಚ್ಚುವರಿಯಾಗಿ ಯಾವುದಾದರು ಕಾಮಗಾರಿಗಳನ್ನು ಸೇರ್ಪಡೆ ಮಾಡುವುದಿದ್ದರು ಕೂಡ ಮಾಹಿತಿಯನ್ನು ನಿಡುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ನಗರಾಭಿವೃದ್ಧಿ ಯೋಜನಾ ಯೋಜನಾ ನಿರ್ದೇಶಕರಾದ ರುದ್ರಮುನಿ, ಮಹಾನಗರ ಪಾಲಿಕೆ ಆಯುಕ್ತರಾದ ಕೃಷ್ಣ ಮೂರ್ತಿ ಮತ್ತಿತರರು ಉಪಸ್ಥಿತರಿದ್ದರು.

ಒಂದು ವರ್ಷದ ಕಾಯುವಿಕೆಗೆ ತೆರೆ; ತೆರೆದ ಹಾಸನಾಂಬೆ ಗರ್ಭಗುಡಿ ಬಾಗಿಲು

ಅರಸು ವಂಶಸ್ಥರಿಂದ ಬಾಳೆಕಂಬ ಭೇದನದೊಂದಿಗೆ ಜಾತ್ರೆಗೆ ಚಾಲನೆ

ಪ್ರಜಾ ಭಾರತ ವರದಿ

ಹಾಸನ: ಒಂದು ವರ್ಷದ ನಿರೀಕ್ಷೆ, ಶತಮಾನಗಳ ಸಂಪ್ರದಾಯ, ಭಕ್ತಿಯ ಪರಾಕಾಷ್ಠೆ... ಮಂಗಳವಾದ್ಯಗಳ ನಿನಾದದ ನಡುವೆ ಹಾಸನದ ಅಧಿದೇವತೆ ಶ್ರೀ ಹಾಸನಾಂಬೆ ದೇವಿಯ ಗರ್ಭಗುಡಿ ಬಾಗಿಲು ಗುರುವಾರ ಮಧ್ಯಾಹ್ನ 12.29ಕ್ಕೆ ಶಾಸ್ತ್ರೋಕ್ತ ವಿಧಿವಿಧಾನಗಳೊಂದಿಗೆ ತೆರೆಯಿತು. ಮೈಸೂರು ಅರಸು ವಂಶಸ್ಥ ನಂಜರಾಜ ಅರಸ್ ಅವರು ಗೊನೆಯುಳ್ಳ ಬಾಳೆಕಂಬವನ್ನು ಕತ್ತಿಯಿಂದ ಭೇದಿಸಿದ ಬಳಿಕ ಗರ್ಭಗುಡಿ ಬಾಗಿಲು ತೆರೆಯುತ್ತಿದ್ದಂತೆ ನೆರೆದಿದ್ದ



ಭಕ್ತರು ಜಯಘೋಷ ಮೊಳಗಿಸಿದರು. ಇದರೊಂದಿಗೆ 2026ನೇ ಸಾಲಿನ ಹಾಸನಾಂಬೆ ಹಾಗೂ ಸಿದ್ದೇಶ್ವರಸ್ವಾಮಿ ಜಾತ್ರಾ ಮಹೋತ್ಸವಕ್ಕೆ ವಿಧ್ಯುಕ್ತ ಚಾಲನೆ ದೊರೆಯಿತು.

ವರ್ಷಕ್ಕೊಮ್ಮೆ ಮಾತ್ರ ದರ್ಶನ ನೀಡುವ ತಾಯಿ ಹಾಸನಾಂಬೆಯ ದರ್ಶನಕ್ಕಾಗಿ ಜಿಲ್ಲೆಯಷ್ಟೇ ಅಲ್ಲದೆ ರಾಜ್ಯದ ವಿವಿಧ ಭಾಗಗಳಿಂದಲೂ ಭಕ್ತರು ಆಗಮಿಸುತ್ತಾರೆ. ಗರ್ಭಗುಡಿ ಬಾಗಿಲು ತೆರೆಯುವ ಅಪರೂಪದ ಕ್ಷಣಕ್ಕೆ ಸಾಕ್ಷಿಯಾಗಲು ಭಕ್ತರು ಕಾತರದಿಂದ ಕಾಯುತ್ತಿದ್ದರು. ಸಂಪ್ರದಾಯದಂತೆ ಬಾಳೆಕಂಬಕ್ಕೆ ವಿಶೇಷ ಪೂಜೆ ಸಲ್ಲಿಸಿ, ಅರಸು ವಂಶಸ್ಥರು ಒಂಬತ್ತು ಬಾರಿ ಪ್ರದಕ್ಷಿಣೆ ಹಾಕಿದ ಬಳಿಕ ಕತ್ತಿಯಿಂದ ಭೇದಿಸಿದರು. ಈ ಧಾರ್ಮಿಕ ಆಚರಣೆ ಪೂರ್ಣಗೊಂಡ ನಂತರ ಗರ್ಭಗುಡಿ ಬಾಗಿಲು ತೆರೆಯಲಾಯಿತು. ಬಾಳೆಕಂಬದ ಕಂದು ಪಡೆಯಲು ಭಕ್ತರು ಮುಗಿಬಿದ್ದ ದೃಶ್ಯವೂ ಕಂಡುಬಂತು.

● ಭಕ್ತರಿಗೆ ಸುಗಮ ದರ್ಶನದ ವ್ಯವಸ್ಥೆ

ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಮಾತನಾಡಿ, ಹಾಸನಾಂಬೆ ಜಾತ್ರೆಯ ಧಾರ್ಮಿಕ ಆಚರಣೆಗಳು ವಿಶೇಷ ಪರಂಪರೆಯನ್ನು ಹೊಂದಿದ್ದು, ಉತ್ಸವದ ಯಶಸ್ಸಿಗೆ ಜಿಲ್ಲಾಡಳಿತ, ಅಧಿಕಾರಿಗಳು, ಸಿಬ್ಬಂದಿ ಹಾಗೂ ಮಾಧ್ಯಮ ಪ್ರತಿನಿಧಿಗಳು ಸಹಕರಿಸಬೇಕು ಎಂದು ಮನವಿ ಮಾಡಿದರು.

ಮುಜರಾಯಿ ಸಚಿವ ಬಸವಂತಪ್ಪ ಮಾತನಾಡಿ, ದೂರದ ಊರುಗಳಿಂದ ಆಗಮಿಸುವ ಭಕ್ತರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಎಲ್ಲರೂ ಆತುರಪಡದೆ ಶಾಂತಿ ಮತ್ತು ಶಿಸ್ತಿನಿಂದ ಸರದಿಯಲ್ಲಿ ಸಾಗುತ್ತಾ ದೇವಿಯ ದರ್ಶನ ಪಡೆಯಬೇಕು ಎಂದರು.

ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಮಾತನಾಡಿ, ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಮನುಷ್ಯ ಎಷ್ಟೇ ಮುಂದುವರಿದರೂ ಪ್ರಕೃತಿಯ ಮಹತ್ವ ಹಾಗೂ ತನ್ನ ಇತಿಮಿತಿಗಳನ್ನು ಅರಿತುಕೊಳ್ಳಬೇಕು. ಭಕ್ತರು ಶಾಂತವಾಗಿ ದೇವಿಯ ದರ್ಶನ ಪಡೆದು, ನಾಡಿಗೆ ಉತ್ತಮ ಮಳೆ–ಬೆಳೆ ಹಾಗೂ ಸರ್ವರ ಒಳಿತಿಗಾಗಿ ಪ್ರಾರ್ಥಿಸಬೇಕು ಎಂದು ಹೇಳಿದರು.

ಸಿದ್ದಗಂಗಾ ಮಠದ ಶ್ರೀ ಶಿವಸಿದ್ದೇಶ್ವರ ಸ್ವಾಮೀಜಿ ಹಾಸನಾಂಬೆ ಜಾತ್ರೆಯ ಐತಿಹಾಸಿಕ ಹಾಗೂ ಧಾರ್ಮಿಕ ಮಹತ್ವವನ್ನು ವಿವರಿಸಿ, ದಿನದ 24 ಗಂಟೆಯೂ ದರ್ಶನಕ್ಕೆ ವ್ಯವಸ್ಥೆ ಕಲ್ಪಿಸಿರುವುದು ಉತ್ತಮ ನಿರ್ಧಾರ ಎಂದರು. ಶಾಸಕ ಎಚ್.ಪಿ. ಸ್ವರೂಪ್ ಪ್ರಕಾಶ್, ಭಕ್ತರಿಗೆ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.



● ಮೊದಲ ದಿನವೇ ಭಕ್ತರ ದಂಡು

ಸಾರ್ವಜನಿಕ ದರ್ಶನಕ್ಕೆ ಅವಕಾಶವಿಲ್ಲ ಎಂಬ ಜಿಲ್ಲಾಡಳಿತದ ಸೂಚನೆಯ ನಡುವೆಯೂ ಗರ್ಭಗುಡಿ ಬಾಗಿಲು ತೆರೆಯುವ ದಿನವೇ ಸಾವಿರಾರು ಭಕ್ತರು ದೇವಾಲಯದತ್ತ ಆಗಮಿಸಿದರು. ಜನಸಂದಣಿ ನಿಯಂತ್ರಿಸಲು ಪೊಲೀಸರು ಮುಖ್ಯ ಪ್ರವೇಶದ್ವಾರವನ್ನು ಮುಚ್ಚಿ, ಹೊಸದಾಗಿ ಪ್ರವೇಶಿಸುವವರಿಗೆ ನಿರ್ಬಂಧ ವಿಧಿಸಿದರು. ಸಾರ್ವಜನಿಕ ದರ್ಶನ ಆರಂಭಕ್ಕೂ ಮುನ್ನವೇ ಭಕ್ತರ ದಂಡು ಹರಿದುಬಂದಿರುವುದು ಮುಂದಿನ ದಿನಗಳಲ್ಲಿ ಜನಸಂದಣಿ ನಿರ್ವಹಣೆಗೆ ಹೆಚ್ಚಿನ ಆದ್ಯತೆ ನೀಡಬೇಕಾದ ಅಗತ್ಯವನ್ನು ಎತ್ತಿತೋರಿಸಿತು.

● ಭದ್ರತೆಗೆ 2,000 ಸಿಬ್ಬಂದಿ ನಿಯೋಜನೆ

ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಮೂರು ಪಾಳಿಗಳಲ್ಲಿ ಸುಮಾರು 2,000 ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ದೇವಾಲಯದ ಸುತ್ತಮುತ್ತ ಭದ್ರತೆ, ಸಂಚಾರ ನಿಯಂತ್ರಣ ಮತ್ತು ಭಕ್ತರ ಸುರಕ್ಷತೆಗೆ ವಿಶೇಷ ವ್ಯವಸ್ಥೆ ಮಾಡಲಾಗಿದೆ.

ಅಕ್ಟೋಬರ್ 30ರಿಂದ ನವೆಂಬರ್ 10ರವರೆಗೆ ಸಾರ್ವಜನಿಕ ದರ್ಶನಕ್ಕೆ ಅವಕಾಶವಿದ್ದು, ಅಕ್ಟೋಬರ್ 29ರಂದು ಬಾಗಿಲು ತೆರೆಯುವ ದಿನ ಹಾಗೂ ನವೆಂಬರ್ 11ರಂದು ಬಾಗಿಲು ಮುಚ್ಚುವ ದಿನ ಸಾರ್ವಜನಿಕ ದರ್ಶನ ಇರುವುದಿಲ್ಲ.

ಕಾರ್ಯಕ್ರಮದಲ್ಲಿ ಸಂಸದ ಶ್ರೇಯಸ್ ಪಟೇಲ್, ದಕ್ಷಿಣ ವಲಯ ಐಜಿಪಿ ಡಾ. ಬೋರಲಿಂಗಯ್ಯ, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭಾನ್ವಿತಾ, ಆಡಳಿತಾಧಿಕಾರಿ ಜಗದೀಶ್ ಗಂಗಣ್ಣನವರ್ ಸೇರಿದಂತೆ ಹಲವು ಗಣ್ಯರು ಹಾಗೂ ವಿವಿಧ ಮಠಗಳ ಸ್ವಾಮೀಜಿಗಳು ಪಾಲ್ಗೊಂಡಿದ್ದರು. ದೇವಾಲಯದ ಆವರಣವನ್ನು ಹೂವಿನಿಂದ ಅಲಂಕರಿಸಲಾಗಿದ್ದು, ಧಾರ್ಮಿಕ ವಾತಾವರಣ ಭಕ್ತರ ಗಮನ ಸೆಳೆಯಿತು.

ಮಾಜಿ ಸೈನಿಕರ ಆರೋಗ್ಯ ಸೇವೆಗೆ ಹಾಸನದ ಲಯನ್ಸ್ ಕ್ಲಬ್ ನೆರವು



ಪ್ರಜಾ ಭಾರತ ವರದಿ

ಹಾಸನ: ದೇಶದ ರಕ್ಷಣೆಗಾಗಿ ಸೇವೆ ಸಲ್ಲಿಸಿದ ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರಿಗೆ ವೈದ್ಯಕೀಯ ಸೇವೆಗಳನ್ನು ಮತ್ತಷ್ಟು ಸುಗಮಗೊಳಿಸುವ ನಿಟ್ಟಿನಲ್ಲಿ ಲಯನ್ಸ್ ಕ್ಲಬ್ ಹಾಸನ್ ಮಾನವೀಯ ಸೇವಾ ಕಾರ್ಯಕ್ಕೆ ಮುಂದಾಗಿದೆ. ನಗರದ ಮಾಜಿ ಸೈನಿಕರ ಆರೋಗ್ಯ ಸೇವಾ ಕೇಂದ್ರವಾದ ಇ.ಸಿ.ಹೆಚ್.ಎಸ್. ಕ್ಲಿನಿಕ್‌ಗೆ ರಕ್ತ ಪರೀಕ್ಷಾ ಉಪಕರಣಗಳ ನಿರಂತರ ಕಾರ್ಯನಿರ್ವಹಣೆಗೆ ಅನುಕೂಲವಾಗುವಂತೆ 1.5 ಕೆವಿಎ ಸಾಮರ್ಥ್ಯದ ಆನ್‌ಲೈನ್ ಯುಪಿಎಸ್ ಅನ್ನು ಕೊಡುಗೆಯಾಗಿ ನೀಡಿದೆ.

ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾದಾಗ ವೈದ್ಯಕೀಯ ಪರೀಕ್ಷೆಗಳ ಪ್ರಕ್ರಿಯೆಗೆ ತೊಂದರೆಯಾಗದಂತೆ ಅಗತ್ಯ ವಿದ್ಯುತ್ ಬ್ಯಾಕಪ್ ಒದಗಿಸುವುದು ಈ ಕೊಡುಗೆಯ ಪ್ರಮುಖ ಉದ್ದೇಶವಾಗಿದೆ. ಇದರಿಂದ ಕ್ಲಿನಿಕ್‌ನಲ್ಲಿ ರಕ್ತ ಪರೀಕ್ಷೆ ಸೇರಿದಂತೆ ಅಗತ್ಯ ವೈದ್ಯಕೀಯ ಸೇವೆಗಳನ್ನು ನಿರಂತರವಾಗಿ ಒದಗಿಸಲು ನೆರವಾಗಲಿದೆ. ಮಾಜಿ ಸೈನಿಕರು ಹಾಗೂ ಅವರ ಕುಟುಂಬದ ಸದಸ್ಯರಿಗೆ ಆರೋಗ್ಯ ಸೇವೆ ಲಭ್ಯತೆಯನ್ನು ಸುಧಾರಿಸುವ ನಿಟ್ಟಿನಲ್ಲಿ ಈ ನೆರವು ಮಹತ್ವ ಪಡೆದಿದೆ. ಇ.ಸಿ.ಹೆಚ್.ಎಸ್. ಕ್ಲಿನಿಕ್‌ನ ಉಸ್ತುವಾರಿ ಅಧಿಕಾರಿ ನಿವೃತ್ತ ವಿಂಗ್ ಕಮಾಂಡರ್ ರಾಜು ಹಾಗೂ ಕ್ಲಿನಿಕ್ ಪ್ರತಿನಿಧಿ ಸುಬೇದಾರ್ ಬಲರಾಮ್ ಅವರು ಯುಪಿಎಸ್ ಸ್ವೀಕರಿಸಿದರು.

ಲಯನ್ಸ್ ಕ್ಲಬ್ ಹಾಸನ್ ಅಧ್ಯಕ್ಷ ವೆಂಕಟೇಶ್ ಜವರಪ್ಪ ಅವರ ನೇತೃತ್ವದಲ್ಲಿ ನಡೆದ ಈ ಸೇವಾ ಕಾರ್ಯದಲ್ಲಿ ಝೋನ್ ಚೇರ್‌ಪರ್ಸನ್ ರಮೇಶ್, ರೀಜನಲ್ ಚೇರ್‌ಮನ್ ನಾಗೇಶ್, ಎಚ್.ಆರ್. ಚಂದ್ರೇಗೌಡ, ಕಿರಣ್ ಕುಮಾರ್ ಸಿ.ಕೆ., ಅಶೋಕ್ ಕುಮಾರ್ ಎಚ್.ಪಿ., ಎಚ್.ಕೆ. ಮಂಜುನಾಥ್ ಹಾಗೂ ಕೆ.ಆರ್. ಮಲ್ಲೇಶ್ ಗೌಡ ಭಾಗವಹಿಸಿದ್ದರು. ಸಮಾಜದ ಅಗತ್ಯಗಳಿಗೆ ಸ್ಪಂದಿಸುವ ಉದ್ದೇಶದಿಂದ ಕೈಗೊಂಡಿರುವ ಈ ಕಾರ್ಯವು ಮಾಜಿ ಸೈನಿಕರ ಆರೋಗ್ಯ ಮತ್ತು ಕಲ್ಯಾಣದ ಬಗ್ಗೆ ಲಯನ್ಸ್ ಕ್ಲಬ್ ಹೊಂದಿರುವ ಕಾಳಜಿಯನ್ನು ಪ್ರತಿಬಿಂಬಿಸಿದೆ. ದೇಶಸೇವೆಯಲ್ಲಿ ತೊಡಗಿದ್ದ ಯೋಧರಿಗೆ ಅಗತ್ಯ ಸೌಲಭ್ಯಗಳ ಮೂಲಕ ನೆರವಾಗುವುದು ಸಮಾಜದ ಜವಾಬ್ದಾರಿಯೂ ಆಗಿದ್ದು, ಇಂತಹ ಸೇವಾ ಕಾರ್ಯಗಳು ಸಾರ್ವಜನಿಕ ಆರೋಗ್ಯ ವ್ಯವಸ್ಥೆಗೆ ಪೂರಕವಾಗಿವೆ.

ಶಾಸಕ ಸ್ವರೂಪ್ ಪ್ರಕಾಶ್ ವಿರುದ್ಧ ಭ್ರಷ್ಟಾಚಾರದ ಆರೋಪ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ಪಂಜಿನ ಮೆರವಣಿಗೆ



ಪ್ರಜಾ ಭಾರತ ವರದಿ

ಹಾಸನ: ಶಾಸಕ ಸ್ವರೂಪ್ ಪ್ರಕಾಶ್ ವಿರುದ್ಧ ಭ್ರಷ್ಟಾಚಾರದ ಆರೋಪಗಳನ್ನು ಹೊರಿಸಿ, ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಆಗ್ರಹಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ನಗರದ ಎನ್.ಆರ್. ವೃತ್ತದ ಬಳಿ ಪಂಜಿನ ಮೆರವಣಿಗೆ ನಡೆಸಿ ಪ್ರತಿಭಟನೆ ನಡೆಸಲಾಯಿತು.

ರಾಜ್ಯ ಗ್ಯಾರಂಟಿ ಸಮಿತಿಯ ಹಾಸನ ತಾಲೂಕು ಅಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡ ಬನವಾಸೆ ರಂಗಸ್ವಾಮಿ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ, ಶಾಸಕರ ವಿರುದ್ಧ ವಿವಿಧ ಆರೋಪಗಳನ್ನು ಮಾಡಲಾಯಿತು. ಈ ವೇಳೆ ಮಾತನಾಡಿದ ಬನವಾಸೆ ರಂಗಸ್ವಾಮಿ ಹಾಗೂ ವಕೀಲ ದೇವರಾಜೇಗೌಡ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ಎಸ್‌ಸಿಎಸ್‌ಪಿ, ಟಿಎಸ್‌ಪಿ ಅನುದಾನದಲ್ಲಿ ಕಮಿಷನ್ ಪಡೆಯಲಾಗುತ್ತಿದೆ ಎಂದು ಆರೋಪಿಸಿ, ಈ ಕುರಿತು ಸಮಗ್ರ ತನಿಖೆ ನಡೆಸುವಂತೆ ಆಗ್ರಹಿಸಿದರು.

ಸಾರ್ವಜನಿಕ ಹಣದ ಬಳಕೆಯಲ್ಲಿ ಪಾರದರ್ಶಕತೆ ಇರಬೇಕು. ಶಾಸಕರ ವಿರುದ್ಧ ಕೇಳಿಬಂದಿರುವ ಆರೋಪಗಳ ಹಿನ್ನೆಲೆಯಲ್ಲಿ ಅವರು ರಾಜೀನಾಮೆ ನೀಡಬೇಕು. ರಾಜ್ಯಪಾಲರು ಮಧ್ಯಪ್ರವೇಶಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಆರೋಪಗಳ ಬಗ್ಗೆ ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರೆಂದು ಸಾಬೀತಾದವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.


ಮುಂದಿನ ದಿನಗಳಲ್ಲಿ ಹೋರಾಟವನ್ನು ತೀವ್ರಗೊಳಿಸುವುದಾಗಿ ಎಚ್ಚರಿಸಿದ ಕಾಂಗ್ರೆಸ್ ಮುಖಂಡರು, ಪ್ರತಿಭಟನೆಯಲ್ಲಿ ಪಕ್ಷದ ಹಿರಿಯ ಹಾಗೂ ಯುವ ಮುಖಂಡರು, ವಿವಿಧ ಘಟಕಗಳ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

ದೇವರ ಸೇವೆಗೆ ಆದ್ಯತೆ, ಸಾರ್ವಜನಿಕರ ಕೆಲಸಕ್ಕೆ ನಿರ್ಲಕ್ಷ್ಯವೇ?

ತಾಲೂಕು ಕಚೇರಿಯಲ್ಲಿ ಅಧಿಕಾರಿಗಳು, ಸಿಬ್ಬಂದಿ ಗೈರು: ಗಣೇಶ್ ಆಕ್ರೋಶ

ಪ್ರಜಾ ಭಾರತ ವರದಿ

ಚನ್ನರಾಯಪಟ್ಟಣ: ಹಾಸನಾಂಬೆ ದೇವಿ ಉತ್ಸವದ ಕರ್ತವ್ಯಕ್ಕೆ ಸರ್ಕಾರಿ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ನಿಯೋಜಿಸಿರುವುದರಿಂದ ಸಾರ್ವಜನಿಕರ ಕೆಲಸಗಳು ಸ್ಥಗಿತಗೊಂಡಿವೆ ಎಂದು ಸಾಮಾಜಿಕ ಹೋರಾಟಗಾರ ಗಣೇಶ್ ಆರೋಪಿಸಿದ್ದಾರೆ.



ಪಟ್ಟಣದ ತಾಲೂಕು ಕಚೇರಿ ಮುಂಭಾಗದಲ್ಲಿ ಮಾತನಾಡಿದ ಅವರು, ಕಳೆದ ಮೂರು–ನಾಲ್ಕು ತಿಂಗಳಿಂದ ಎಸ್‌ಐಆರ್ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯದ ನೆಪದಲ್ಲಿ ಸಾರ್ವಜನಿಕರ ಕೆಲಸಗಳಿಗೆ ಹಿನ್ನಡೆಯಾಗಿತ್ತು.

ಇದೀಗ ಮತದಾರರ ಪರಿಷ್ಕರಣೆ ಮುಗಿದ ಬೆನ್ನಲ್ಲೇ ಹಾಸನಾಂಬೆ ಉತ್ಸವದ ಕರ್ತವ್ಯಕ್ಕೆ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ನಿಯೋಜಿಸಿರುವುದರಿಂದ ಜನರು ಮತ್ತಷ್ಟು ತೊಂದರೆ ಅನುಭವಿಸುವಂತಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸಾರ್ವಜನಿಕರು ತಮ್ಮ ಕೆಲಸಗಳಿಗಾಗಿ ತಾಲೂಕು ಕಚೇರಿಗೆ ಭೇಟಿ ನೀಡಿದಾಗ ಅಧಿಕಾರಿಗಳು ಹಾಗೂ ಸಿಬ್ಬಂದಿ ಲಭ್ಯವಿಲ್ಲದೆ ಕಚೇರಿ ಖಾಲಿ ಇರುವ ಪರಿಸ್ಥಿತಿ ನಿರ್ಮಾಣವಾಗಿದೆ.

ಈ ಬಗ್ಗೆ ವಿಚಾರಿಸಿದರೆ, ನವೆಂಬರ್ 14ರವರೆಗೆ ಹಾಸನಾಂಬೆ ಉತ್ಸವದ ಕರ್ತವ್ಯಕ್ಕೆ ಸಿಬ್ಬಂದಿಯನ್ನು ನಿಯೋಜಿಸಿರುವುದರಿಂದ ಕಚೇರಿಯಲ್ಲಿ ಅಧಿಕಾರಿಗಳು ಸಿಗುವುದಿಲ್ಲ ಎಂಬ ಉತ್ತರ ನೀಡಲಾಗುತ್ತಿದೆ ಎಂದು ದೂರಿದರು.

ಸರ್ಕಾರಿ ನೌಕರರು ಉತ್ಸವದ ಕರ್ತವ್ಯ ನಿರ್ವಹಿಸುವುದಕ್ಕೆ ವಿರೋಧವಿಲ್ಲ.

ಆದರೆ, ಇದರಿಂದ ಸಾರ್ವಜನಿಕರ ದೈನಂದಿನ ಕೆಲಸಗಳು ಸಂಪೂರ್ಣವಾಗಿ ಸ್ಥಗಿತಗೊಳ್ಳಬಾರದು. ಜನರ ಸಮಸ್ಯೆಗಳಿಗೆ ಸ್ಪಂದಿಸಲು ಪರ್ಯಾಯ ವ್ಯವಸ್ಥೆ ಕಲ್ಪಿಸುವುದು ಜಿಲ್ಲಾಡಳಿತದ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಈ ಬಗ್ಗೆ ಜಿಲ್ಲಾಧಿಕಾರಿಗಳು ಕೂಡಲೇ ಗಮನಹರಿಸಿ, ತಾಲೂಕು ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸಗಳು ಸುಗಮವಾಗಿ ನಡೆಯುವಂತೆ ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ವಿವಿಧ ಸಂಘಟನೆಗಳು ಹಾಗೂ ಸಾರ್ವಜನಿಕರ ಸಹಕಾರದೊಂದಿಗೆ ಉಗ್ರ ಹೋರಾಟ ನಡೆಸಲಾಗುವುದು ಎಂದು ಗಣೇಶ್ ಎಚ್ಚರಿಸಿದರು.

ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸುವ ಮನಸ್ಥಿತಿಯಲ್ಲಿ ಕಾಂಗ್ರೆಸ್ ಸರ್ಕಾರವಿಲ್ಲ: ವಿಜಯೇಂದ್ರ

ಸ್ಟಿಂಗ್ ಆಪರೇಷನ್ ವಿಚಾರದಲ್ಲಿ ಆಡಳಿತ ಪಕ್ಷದ ಶಾಸಕರಲ್ಲೂ ಆತಂಕ: ಬಿಜೆಪಿ ರಾಜ್ಯಾಧ್ಯಕ್ಷ

ಪ್ರಜಾ ಭಾರತ ವರದಿ

ಸಕಲೇಶಪುರ: ಇಂದಿನ ಚುನಾವಣಾ ಫಲಿತಾಂಶದ ಬಳಿಕ ಮುಖ್ಯಮಂತ್ರಿ ಅವರ ಮುಖಚರ್ಯೆ ಗಮನಿಸಿದರೆ, ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸುವ ಮಾನಸಿಕ ಸ್ಥಿತಿಯಲ್ಲಿ ಸರ್ಕಾರ ಇದ್ದಂತಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಟೀಕಿಸಿದರು.

ಸಕಲೇಶಪುರದಲ್ಲಿ ಮಾತನಾಡಿದ ಅವರು, ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಂಬಂಧಿಸಿದ ಮೀಸಲಾತಿ ವರ್ಗೀಕರಣದಲ್ಲಿ ಗೊಂದಲ ಸೃಷ್ಟಿಸಲಾಗಿದೆ. ಸರ್ಕಾರ ಮಾಡಿರುವ ವರ್ಗೀಕರಣದಿಂದ ಅವರೇ ನ್ಯಾಯಾಲಯದ ಮೊರೆ ಹೋಗಿ ತಡೆಯಾಜ್ಞೆ ಪಡೆಯುವ ಪರಿಸ್ಥಿತಿ ನಿರ್ಮಾಣವಾಗಿದೆ. ರಾಜ್ಯದ ವಾತಾವರಣ ಗಮನಿಸಿದರೆ ಕಾಂಗ್ರೆಸ್ ಸರ್ಕಾರಕ್ಕೆ ಚುನಾವಣೆ ನಡೆಸುವ ಮನಸ್ಸಿಲ್ಲದಂತಿದೆ. ಆದರೆ, ಚುನಾವಣೆ ನಡೆದರೆ ಬಿಜೆಪಿ ಸನ್ನದ್ಧವಾಗಿದೆ. ಬೂತ್ ವಿಜಯ ಸಂಕಲ್ಪ ಯಾತ್ರೆಯ ಅಂಗವಾಗಿ ಎಲ್ಲ ವಿಧಾನಸಭಾ ಕ್ಷೇತ್ರಗಳಿಗೆ ಭೇಟಿ



ನೀಡುತ್ತಿದ್ದು, ಮತದಾರರ ಆಶೀರ್ವಾದದಿಂದ ಗೆಲುವು ಸಾಧಿಸುವ ವಿಶ್ವಾಸವಿದೆ ಎಂದರು.

● ಮೈತ್ರಿ ಬಗ್ಗೆ ವರಿಷ್ಠರ ನಿರ್ಧಾರವೇ ಅಂತಿಮ

ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮೈತ್ರಿ ವಿಚಾರವಾಗಿ ಪ್ರತಿಕ್ರಿಯಿಸಿದ ವಿಜಯೇಂದ್ರ, ಬಿಜೆಪಿ ರಾಷ್ಟ್ರೀಯ ಪಕ್ಷವಾಗಿದ್ದು, ರಾಷ್ಟ್ರೀಯ ವರಿಷ್ಠರು ನೀಡುವ ಸೂಚನೆಯಂತೆ ನಡೆದುಕೊಳ್ಳುವುದು ನಮ್ಮೆಲ್ಲರ ಕರ್ತವ್ಯ. ಈ ಬಗ್ಗೆ ವರಿಷ್ಠರ ನಿರ್ಧಾರಕ್ಕಾಗಿ ಕಾಯಬೇಕಿದೆ ಎಂದು ತಿಳಿಸಿದರು.

● ಸ್ಟಿಂಗ್ ಆಪರೇಷನ್ ಬಗ್ಗೆ ಕಾಂಗ್ರೆಸ್‌ನಲ್ಲೇ ಆತಂಕ

ಸ್ಟಿಂಗ್ ಆಪರೇಷನ್ ವಿಚಾರದಲ್ಲಿ ಬಿಜೆಪಿ ಮೌನವಾಗಿದೆ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಮಾತನಾಡುವ ಅಗತ್ಯವೇನಿದೆ, ಇದು ಸ್ಪಷ್ಟ ಪ್ರಕರಣ ಎಂದು ಹೇಳಿದರು. ಕೆಪಿಸಿಸಿ ಕಚೇರಿಯಲ್ಲಿದ್ದ ಸಿಡಿ ತಯಾರಿಕಾ ಕಂಪನಿ ಇದೀಗ ವಿಧಾನಸೌಧಕ್ಕೆ ಸ್ಥಳಾಂತರಗೊಂಡಂತಿದೆ ಎಂದು ವ್ಯಂಗ್ಯವಾಡಿದರು. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗಷ್ಟೇ ಅಲ್ಲದೆ, ಆಡಳಿತ ಪಕ್ಷದ ಸಚಿವರು ಮತ್ತು ಶಾಸಕರ ಮೇಲೂ ಸ್ಟಿಂಗ್ ಆಪರೇಷನ್ ನಡೆದಿರಬಹುದು ಎಂಬ ಅನುಮಾನ ಕಾಡುತ್ತಿದೆ. ಆಡಳಿತ ಪಕ್ಷದ ಶಾಸಕರೂ ಆತಂಕದಲ್ಲಿದ್ದಾರೆ. ಶಾಸಕರ ವಿಶ್ವಾಸ ಗಳಿಸಲು ಸಾಧ್ಯವಾಗದ ಹಿನ್ನೆಲೆಯಲ್ಲಿ, ಅಧಿಕಾರದ ಹಪಾಹಪಿಯಿಂದ ಇಂತಹ ಷಡ್ಯಂತ್ರಗಳಿಗೆ ಮುಂದಾಗಲಾಗಿದೆ ಎಂದು ಕಾಂಗ್ರೆಸ್ ಶಾಸಕರೇ ಮಾತನಾಡುತ್ತಿದ್ದಾರೆಂದು ವಿಜಯೇಂದ್ರ ಆರೋಪಿಸಿದರು.

ಪ್ರಜಾ ಭಾರತ
ಶುಭ ನುಡಿ

"ಯಾವುದನ್ನು ಬಯಸಬೇಡಿ. ನಮ್ಮನ್ನು ದುಃಖಕ್ಕೊಳಪಡಿಸುವ ಎಲ್ಲ ಕಷ್ಟಗಳಿಗೂ ಆಸೆಯೇ ಕಾರಣ."

ಗ್ಯಾರಂಟಿ ಯೋಜನೆಗಳ ಭ್ರಮೆಯಲ್ಲಿ ಕಾಂಗ್ರೆಸ್: ಹೆಚ್.ಕೆ. ಸುರೇಶ್

ನಾಲ್ಕು ಶಿಕ್ಷಕರ ಕ್ಷೇತ್ರಗಳಲ್ಲಿ ಬಿಜೆಪಿ-ಜೆಡಿಎಸ್ ಗೆಲುವು : ಬೇಲೂರಿನಲ್ಲಿ ಬಿಜೆಪಿ ಕಾರ್ಯಕರ್ತರ ಸಂಭ್ರಮ

ಬೇಲೂರು: ಕೇವಲ ಗ್ಯಾರಂಟಿ ಯೋಜನೆಗಳ ಮೂಲಕವೇ ಅಧಿಕಾರ ಉಳಿಸಿಕೊಳ್ಳಬಹುದು ಎಂಬ ಭ್ರಮೆಯಲ್ಲಿರುವ ಕಾಂಗ್ರೆಸ್ ಸರ್ಕಾರಕ್ಕೆ ವಿಧಾನ ಪರಿಷತ್ ಚುನಾವಣೆಯ ಫಲಿತಾಂಶ ಮತದಾರರು ನೀಡಿರುವ ಸ್ಪಷ್ಟ ಸಂದೇಶವಾಗಿದೆ ಎಂದು ಬೇಲೂರು ಶಾಸಕ ಹೆಚ್.ಕೆ. ಸುರೇಶ್ ಹೇಳಿದರು.

ಪಟ್ಟಣದ ಬಸವೇಶ್ವರ ವೃತ್ತದ ಬಳಿ ಬಿಜೆಪಿ ಕಾರ್ಯಕರ್ತರು ನಾಲ್ಕು ಶಿಕ್ಷಕರ ಕ್ಷೇತ್ರಗಳ ಚುನಾವಣೆಯಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿಗಳು ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಪಟಾಕಿ ಸಿಡಿಸಿ



ಸಂಭ್ರಮಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಸುರೇಶ್, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದರೂ ನಿರೀಕ್ಷಿತ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ. ಗ್ಯಾರಂಟಿ ಯೋಜನೆಗಳ ಮೂಲಕ ಜನರ ಗಮನ ಬೇರೆಡೆ ಸೆಳೆಯುತ್ತಾ ಆಡಳಿತ ನಡೆಸುತ್ತಿರುವುದನ್ನು ಮತದಾರರು ಗಮನಿಸಿದ್ದಾರೆ. ಈ ಚುನಾವಣೆಯ ಮೂಲಕ ಜನರು ತಕ್ಕ ಪಾಠ ಕಲಿಸಿದ್ದಾರೆ ಎಂದರು.

ದೇಶದ ಭದ್ರತೆ ಮತ್ತು ಅಭಿವೃದ್ಧಿಯ ದೃಷ್ಟಿಯಿಂದ ಎನ್‌ಡಿಎ ಸರ್ಕಾರ ಅಧಿಕಾರದಲ್ಲಿರುವುದು ಅಗತ್ಯವಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಅಭಿವೃದ್ಧಿಪರ ಕಾರ್ಯಗಳನ್ನು ದೇಶದ ಜನರು ಮೆಚ್ಚುತ್ತಿದ್ದಾರೆ. ಆದ ರೆ ಕಾಂಗ್ರೆಸ್ ಅನಗತ್ಯ ವಿಚಾರಗಳನ್ನು ಮುಂದಿಟ್ಟುಕೊಂಡು ಪ್ರತಿಭಟನೆ ನಡೆಸುವ ಮೂಲಕ ವಿದ್ಯಾರ್ಥಿಗಳ ಭವಿಷ್ಯಕ್ಕೆ ಧಕ್ಕೆಯುಂಟು ಮಾಡುತ್ತಿದೆ ಎಂದು ಆರೋಪಿಸಿದರು.

ಮುಂಬರುವ 2028ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿಕೂಟ ಸಂಪೂರ್ಣ ಬಹುಮತದೊಂದಿಗೆ ಅಧಿಕಾರಕ್ಕೆ ಬರಲಿದೆ. ಕಾಂಗ್ರೆಸ್ ಪಕ್ಷಕ್ಕೆ ಈ ಚುನಾವಣೆಯ ಫಲಿತಾಂಶ ಎಚ್ಚರಿಕೆಯಾಗಿದೆ ಎಂದು ಹೇಳಿದರು.

● ಬ್ಯಾಲೆಟ್‌ನಲ್ಲೂ ಕಾಂಗ್ರೆಸ್‌ಗೆ ಹಿನ್ನಡೆ: ಕೌರಿ ಸಂಜು

ಬಿಜೆಪಿ ತಾಲೂಕು ಅಧ್ಯಕ್ಷ ಕೌರಿ ಸಂಜು ಮಾತನಾಡಿ, ಬಿಜೆಪಿ ಇವಿಎಂ ಮೂಲಕ ಅಕ್ರಮವಾಗಿ ಗೆಲುವು ಸಾಧಿಸುತ್ತದೆ ಎಂದು ಕಾಂಗ್ರೆಸ್ ನಾಯಕರು ಆರೋಪಿಸುತ್ತಿದ್ದರು. ಆದರೆ ವಿಧಾನ ಪರಿಷತ್ ಚುನಾವಣೆಯಲ್ಲಿ ಬ್ಯಾಲೆಟ್ ಪೇಪರ್ ಮೂಲಕ ಮತದಾನ ನಡೆದಿದ್ದರೂ ಕಾಂಗ್ರೆಸ್‌ಗೆ ನಿರೀಕ್ಷಿತ ಯಶಸ್ಸು ಸಿಕ್ಕಿಲ್ಲ. ಇದಕ್ಕಿಂತ ಬೇರೆ ಸಾಕ್ಷಿ ಬೇಕೇ ಎಂದು ಪ್ರಶ್ನಿಸಿದರು.

ಬಿಜೆಪಿ ಜನರನ್ನು ಸೋಮಾರಿಗಳನ್ನಾಗಿಸುವ ಬದಲು ಸ್ವಾವಲಂಬಿಗಳನ್ನಾಗಿಸುವ ಮತ್ತು ಅಭಿವೃದ್ಧಿಗೆ ಪೂರಕವಾದ ಯೋಜನೆಗಳನ್ನು ಜಾರಿಗೊಳಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದೆ.

ಆದರೆ ಕಾಂಗ್ರೆಸ್ ಸರ್ಕಾರದ ಜನಪರ ಕಾರ್ಯಗಳ ಬಗ್ಗೆ ಜನರಲ್ಲಿ ಅಸಮಾಧಾನವಿದೆ ಎಂಬುದಕ್ಕೆ ಈ ಫಲಿತಾಂಶ ಸಾಕ್ಷಿಯಾಗಿದೆ. ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಮೈತ್ರಿಕೂಟ ಅಧಿಕಾರಕ್ಕೆ ಬರಲು ಈ ಗೆಲುವು ಮುನ್ನುಡಿಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯದ ಜನತೆಗೆ ಬಿಗ್ ಶಾಕ್: ನಂದಿನ ಹಾಲಿನ ದರ ಲೀಟರ್‌ಗೆ ಬರೋಬ್ಬರಿ 8 ರೂ ಹೆಚ್ಚಳ; ನ.1 ರಿಂದಲೇ ಜಾರಿ

ಬೆಂಗಳೂರು: ರಾಜ್ಯ ಸರ್ಕಾರ ರಾಜ್ಯದ ಜನತೆಗೆ ಮತ್ತೊಂದು ದರ ಏರಿಕೆ ಶಾಕ್ ನೀಡಿದ್ದು, ನಂದಿನ ಹಾಲಿನ ದರ ಪ್ರತಿ ಲೀಟರ್‌ಗೆ 8 ರೂಪಾಯಿ ಹೆಚ್ಚಿಸಲು ಗುರುವಾರ ನಡೆದ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ.



ಪ್ರಜಾ ಭಾರತ ವರದಿ

ಹಾಸನ: ಶ್ರೀ ಹಾಸನಾಂಬೆ ದೇವಿ ದರ್ಶನ ಹಾಗೂ ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಪ್ರವಾಸಿಗರಿಗೆ ಜಿಲ್ಲೆಯ ಪ್ರಮುಖ ಪ್ರವಾಸಿ ತಾಣಗಳನ್ನು ಪರಿಚಯಿಸುವ ಉದ್ದೇಶದಿಂದ ಆಯೋಜಿಸಿರುವ ಟೂರ್ ಪ್ಯಾಕೇಜ್ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಚಾಲನೆ ನೀಡಿದರು.

ಗುರುವಾರದಿಂದ ನವೆಂಬರ್ 10ರವರೆಗೆ ಟೂರ್ ಪ್ಯಾಕೇಜ್ ಕಾರ್ಯಕ್ರಮ ನಡೆಯಲಿದ್ದು, ಪ್ರತಿ ಟಿಕೆಟ್‌ಗೆ 1,000 ರೂ. ದರ ನಿಗದಿಪಡಿಸಲಾಗಿದೆ. ಈ ಪ್ಯಾಕೇಜ್‌ನಲ್ಲಿ ಹಾಸನಾಂಬೆ ದೇವಿಯ ವಿಶೇಷ ದರ್ಶನದ ವ್ಯವಸ್ಥೆಯನ್ನೂ ಕಲ್ಪಿಸಲಾಗಿದೆ ಎಂದು ಸಚಿವರು ತಿಳಿಸಿದರು.



ಪ್ರಜಾ ಭಾರತ ವರದಿ

ಹಾಸನ: ಶ್ರೀ ಹಾಸನಾಂಬೆ ದೇವಿ ದರ್ಶನ ಹಾಗೂ ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಆಯೋಜಿಸಿರುವ ರಂಗೋಲಿ ಸ್ಪರ್ಧೆಗೆ ಅಬಕಾರಿ ಸಚಿವ ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಅವರು ಗುರುವಾರ ನಗರದ ಮಹಾರಾಜ ಉದ್ಯಾನವನದಲ್ಲಿ ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿದರು.

ಸ್ಪರ್ಧೆಯನ್ನು ಉದ್ಘಾಟಿಸಿದ ಬಳಿಕ ವಿವಿಧ ಸ್ಪರ್ಧಿಗಳು ಬಿಡಿಸಿದ್ದ ರಂಗೋಲಿಗಳನ್ನು ವೀಕ್ಷಿಸಿದ ಸಚಿವರು, ಕಲಾವಿದರ ಸೃಜನಶೀಲತೆ ಹಾಗೂ ಕಲಾ ಪ್ರತಿಭೆಯನ್ನು ಗಮನಿಸಿದರು.

ಹಾಸನಾಂಬೆ ಜಾತ್ರಾ ಮಹೋತ್ಸವದ ಅಂಗವಾಗಿ ಆಯೋಜಿಸಿರುವ ಈ ಸ್ಪರ್ಧೆಯು ಸಾಂಪ್ರದಾಯಿಕ ರಂಗೋಲಿ ಕಲೆಗೆ ಪ್ರೋತ್ಸಾಹ ನೀಡುವುದರ ಜತೆಗೆ, ಮಹಿಳೆಯರು ಹಾಗೂ ಕಲಾಸಕ್ತರ ಪ್ರತಿಭೆ ಅನಾವರಣಗೊಳಿಸಲು ವೇದಿಕೆಯಾಗಲಿದೆ.



ಪ್ರಜಾ ಭಾರತ ವರದಿ

ಹಾಸನ: ಕ್ರೀಡಾಪಟುಗಳ ಸಾಧನೆಗೆ ಆರ್ಥಿಕ ನೆರವು ಹಾಗೂ ಪ್ರೋತ್ಸಾಹ ಅತ್ಯಗತ್ಯವಾಗಿದ್ದು, ಈ ನಿಟ್ಟಿನಲ್ಲಿ ಹಾಸನ ಪವರ್‌ಲಿಫ್ಟಿಂಗ್ ಸಂಸ್ಥೆಯ ಅಧ್ಯಕ್ಷರಾದ ವಿಜಯಣ್ಣ ಅವರು ಸ್ಪರ್ಧೆಗಳಲ್ಲಿ ಭಾಗವಹಿಸುತ್ತಿರುವ ಜಿಲ್ಲೆಯ ಕ್ರೀಡಾಪಟುಗಳಿಗೆ ವೈಯಕ್ತಿಕವಾಗಿ ಧನಸಹಾಯ ನೀಡಿ ಉತ್ತೇಜನ ನೀಡಿದ್ದಾರೆ.

ದೆಹಲಿಯಲ್ಲಿ ನಡೆಯಲಿರುವ ರಾಷ್ಟ್ರಮಟ್ಟದ ವೇಯ್ಟ್‌ಲಿಫ್ಟಿಂಗ್ ಸ್ಪರ್ಧೆಯಲ್ಲಿ ಭಾಗವಹಿಸುತ್ತಿರುವ ಸಿಂಚನಾ ಕೆ.ಎಚ್. ಹಾಗೂ ಕೇರಳದಲ್ಲಿ ನಡೆಯಲಿರುವ ದಕ್ಷಿಣ ವಲಯದ ಪವರ್‌ಲಿಫ್ಟಿಂಗ್ ಸ್ಪರ್ಧೆಯಲ್ಲಿ ಸ್ಪರ್ಧಿಸಲಿರುವ ಗಿರೀಶ್, ನೂತನರಾಜ್ ಮತ್ತು ಮನನಾ ಅವರಿಗೆ ವಿಜಯಣ್ಣ ಅವರು ವೈಯಕ್ತಿಕ ಧನಸಹಾಯ ನೀಡಿ, ಕ್ರೀಡಾ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡುವಂತೆ ಶುಭ ಹಾರೈಸಿದ್ದಾರೆ. ಕ್ರೀಡಾಪಟುಗಳು ತಮ್ಮ ಪ್ರತಿಭೆಯನ್ನು ರಾಷ್ಟ್ರಮಟ್ಟ ಹಾಗೂ ದಕ್ಷಿಣ ವಲಯದ ವೇದಿಕೆಗಳಲ್ಲಿ ಪ್ರದರ್ಶಿಸಲು ಇಂತಹ ಪ್ರೋತ್ಸಾಹದಾಯಕ ನೆರವು ಸಹಕಾರಿಯಾಗಲಿದೆ. ಸ್ಪರ್ಧೆಗಳಲ್ಲಿ ಯಶಸ್ಸು ಸಾಧಿಸುವುದರ ಜೊತೆಗೆ ಹಾಸನ ಜಿಲ್ಲೆಯ ಕ್ರೀಡಾ ಕ್ಷೇತ್ರದ ಗೌರವವನ್ನು ಹೆಚ್ಚಿಸುವ ವಿಶ್ವಾಸವನ್ನು ಸಂಸ್ಥೆ ವ್ಯಕ್ತಪಡಿಸಿದೆ.

ಕ್ರೀಡಾಪಟುಗಳ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ವೈಯಕ್ತಿಕವಾಗಿ ಧನಸಹಾಯ ನೀಡಿದ ವಿಜಯಣ್ಣ ಅವರ ಕ್ರೀಡಾಪರ ಕಾಳಜಿ ಹಾಗೂ ಸಹಕಾರಕ್ಕೆ ಹಾಸನ ಪವರ್‌ಲಿಫ್ಟಿಂಗ್ ಸಂಸ್ಥೆಯ ಪರವಾಗಿ ಧನ್ಯವಾದಗಳನ್ನು ಸಲ್ಲಿಸಲಾಗಿದೆ. ದೆಹಲಿಯಲ್ಲಿ ನಡೆಯುವ ರಾಷ್ಟ್ರಮಟ್ಟದ ವೇಯ್ಟ್‌ಲಿಫ್ಟಿಂಗ್ ಸ್ಪರ್ಧೆ ಹಾಗೂ ಕೇರಳದಲ್ಲಿ ನಡೆಯುವ ದಕ್ಷಿಣ ವಲಯದ ಪವರ್‌ಲಿಫ್ಟಿಂಗ್ ಸ್ಪರ್ಧೆಗಳಲ್ಲಿ ಭಾಗವಹಿಸುತ್ತಿರುವ ಸಿಂಚನಾ ಕೆ.ಎಚ್., ಗಿರೀಶ್, ನೂತನರಾಜ್ ಮತ್ತು ಮನನಾ ಅವರು ಉತ್ತಮ ಪ್ರದರ್ಶನ ನೀಡಿ ವಿಜೇತರಾಗಿ, ಹಾಸನ ಜಿಲ್ಲೆ ಹಾಗೂ ಸಂಸ್ಥೆಗೆ ಕೀರ್ತಿ ತರಲಿ ಎಂದು ಸಂಸ್ಥೆಯ ಅಧ್ಯಕ್ಷರು, ಕಾರ್ಯದರ್ಶಿಗಳು ಮತ್ತು ಎಲ್ಲಾ ಪದಾಧಿಕಾರಿಗಳು ಹೃತ್ಪೂರ್ವಕ ಶುಭಾಶಯಗಳನ್ನು ಕೋರಿದ್ದಾರೆ.


ಸಾಕಿದವರ ರಕ್ಷಣೆಗೆ ನಾಗರಹಾವಿನೊಂದಿಗೆ ಕಾದಾಟ

ನಾಗರಹಾವನ್ನು ಕೊಂದು ತಾನೂ ಪ್ರಾಣಬಿಟ್ಟ ಶ್ವಾನ; ಕಣ್ಣೀರಿಟ್ಟ ಕುಟುಂಬ

ಪ್ರಜಾ ಭಾರತ ವರದಿ

ಸಕಲೇಶಪುರ: ವಾಸದ ಮನೆಯ ಬಳಿ ಬಂದ ಬೃಹತ್ ಗಾತ್ರದ ನಾಗರಹಾವಿನೊಂದಿಗೆ ಹೋರಾಡಿ, ಸಾಕಿದವರನ್ನು ರಕ್ಷಿಸಿದ ಸಾಕು ನಾಯಿ ಕೊನೆಗೆ ತಾನೇ ಪ್ರಾಣ ಕಳೆದುಕೊಂಡಿರುವ ಹೃದಯವಿದ್ರಾವಕ ಘಟನೆ ತಾಲೂಕಿನ ಕಾಕನಮನೆ ಸಮೀಪದ ಪ್ರಭುನಗರ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ವಡಿವೇಲು ಅವರು ಪ್ರೀತಿಯಿಂದ ಸಾಕಿದ್ದ ಎರಡು ಡ್ಯಾಷ್‌ಹೌಂಡ್ ಜಾತಿಯ ನಾಯಿಗಳು ಮನೆಯ ಬಳಿ ಬಂದ ನಾಗರಹಾವನ್ನು ಕಂಡು ಜೋರಾಗಿ ಬೊಗಳಲಾರಂಭಿಸಿವೆ. ಈ ವೇಳೆ ನಾಯಿಗಳ ಬೊಗಳಾಟ ಕೇಳಿ ಬಾಲಕಿ ಮನೆಯಿಂದ ಹೊರಬಂದು ಕಿರುಚಿಕೊಂಡಿದ್ದಾಳೆ. ತಕ್ಷಣ ಮನೆಯವರು ಹೊರಬಂದು ನೋಡಿದಾಗ, ಎರಡೂ ನಾಯಿಗಳು ನಾಗರಹಾವಿನೊಂದಿಗೆ ಸೆಣಸಾಡುತ್ತಿದ್ದವು.



ಈ ವೇಳೆ ಹೆಣ್ಣು ನಾಯಿಗೆ ನಾಗರಹಾವು ಹಲವು ಬಾರಿ ಕಚ್ಚಿದರೂ, ಜೀವದ ಹಂಗು ತೊರೆದು ಹೋರಾಟ ಮುಂದುವರಿಸಿದೆ. ಕೊನೆಗೆ ನಾಗರಹಾವನ್ನು ಕಚ್ಚಿ ಸಾಯಿಸುವಲ್ಲಿ ನಾಯಿ ಯಶಸ್ವಿಯಾಗಿದೆ. ಆದರೆ, ಹಾವಿನ ವಿಷದ ತೀವ್ರತೆಗೆ ನಾಯಿ ಪ್ರಜ್ಞೆ ತಪ್ಪಿ ಬಿದ್ದಿದೆ.

ಕೂಡಲೇ ಕುಟುಂಬಸ್ಥರು ನಾಯಿಯನ್ನು ಚಿಕಿತ್ಸೆಗಾಗಿ ಹಾಸನದ ಪಶು ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಆದರೆ, ಮಾರ್ಗಮಧ್ಯೆಯೇ ನಾಯಿ ಕೊನೆಯುಸಿರೆಳೆದಿದೆ.

ಮನೆಯವರನ್ನು ಅಪಾಯದಿಂದ ರಕ್ಷಿಸಲು ಹೋರಾಡಿ ಪ್ರಾಣವನ್ನೇ ತ್ಯಾಗ ಮಾಡಿದ ಮುದ್ದಿನ ಶ್ವಾನದ ದುರಂತ ಅಂತ್ಯ ಕಂಡು ವಡಿವೇಲು ಕುಟುಂಬ ಕಣ್ಣೀರಿಟ್ಟಿದೆ. ಸಾಕಿದವರ ಮೇಲಿನ ಪ್ರೀತಿ ಮತ್ತು ನಿಷ್ಠೆಗೆ ಸಾಕ್ಷಿಯಾದ ಶ್ವಾನದ ಸಾವು ಗ್ರಾಮಸ್ಥರಲ್ಲೂ ದುಃಖ ಮೂಡಿಸಿದೆ.

ನಿವೃತ್ತ ಶಿಕ್ಷಕಿ ಕುಟುಂಬದಿಂದ ಪೌರ ಕಾರ್ಮಿಕರಿಗೆ ದೀಪಾವಳಿ ಉಡುಗೊರೆ

ಪ್ರಜಾ ಭಾರತ ವರದಿ

ಸಕಲೇಶಪುರ: ದೀಪಾವಳಿ ಹಬ್ಬದ ಪ್ರಯುಕ್ತ ನಿವೃತ್ತ ಶಿಕ್ಷಕಿ ಶಮೋದ ಶೆಟ್ಟಿ ಹಾಗೂ ರಘುನಾಥ್ ಶೆಟ್ಟಿ ಅವರ ಕುಟುಂಬ ಪೌರ ಕಾರ್ಮಿಕರು ಮತ್ತು ನೀರು ಸರಬರಾಜು ಸಿಬ್ಬಂದಿಗೆ ಬಟ್ಟೆಗಳನ್ನು ವಿತರಿಸುವ ಮೂಲಕ ಮಾನವೀಯತೆ ಮೆರೆದಿದೆ.

ಸಕಲೇಶಪುರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮೈದಾನದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಇದೇ ಶಾಲೆಯಲ್ಲಿ ಗಣಿತ ಶಿಕ್ಷಕಿಯಾಗಿ ಸೇವೆ ಸಲ್ಲಿಸಿದ್ದ ಶಮೋದ ಶೆಟ್ಟಿ ಅವರಿಗೆ ತಾವು ಕಾರ್ಯನಿರ್ವಹಿಸಿದ ಶಾಲೆಯ ಆವರಣದಲ್ಲಿಯೇ ಪೌರ ಕಾರ್ಮಿಕರಿಗೆ ದೀಪಾವಳಿ ಉಡುಗೊರೆ ನೀಡಬೇಕೆಂಬ ಆಸೆಯಿತ್ತು. ಅದರಂತೆ 15 ಮಹಿಳಾ ಪೌರ ಕಾರ್ಮಿಕರಿಗೆ ಸೀರೆ ಹಾಗೂ ಇತರ ಕಾರ್ಮಿಕರಿಗೆ ಬಟ್ಟೆಗಳನ್ನು ವಿತರಿಸಲಾಯಿತು.



ನಗರದ ಸ್ವಚ್ಛತೆ ಮತ್ತು ಕುಡಿಯುವ ನೀರು ಪೂರೈಕೆಗೆ ಶ್ರಮಿಸುವ ಕಾರ್ಮಿಕರನ್ನು ಗೌರವಿಸಿದ ಕುಟುಂಬದ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತವಾಗಿದೆ. ಕಾರ್ಯಕ್ರಮಕ್ಕೆ ಬರಲಾಗದ ಕಾರ್ಮಿಕರಿಗೂ ಉಡುಗೊರೆ ತಲುಪಿಸುವ ವ್ಯವಸ್ಥೆ ಮಾಡಲಾಗಿತ್ತು.

ಈ ಸಂದರ್ಭದಲ್ಲಿ ಹಿಂದೂ ಮುಖಂಡ ರಘು ಸಕಲೇಶಪುರ, ಹಿಂದೂ ಹಿತರಕ್ಷಣಾ ವೇದಿಕೆಯ ವಿಭಾಗ ಸಂಚಾಲಕ ಕೌಶಿಕ್ ಎಚ್.ಎಂ., ತಾಲೂಕು ಸಂಚಾಲಕ ಶಿವುಚಿಪ್ಪಿ ಬೋರೇಗೌಡ, ಹಾನಬಾಳು ಹೋಬಳಿ ಸಂಚಾಲಕ ರವಿ ಲೋಹಿತ್ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

ಪ್ರಚಾರದ ಉದ್ದೇಶವಿಲ್ಲದೆ ಕಾರ್ಮಿಕರೊಂದಿಗೆ ಹಬ್ಬದ ಸಂತೋಷ ಹಂಚಿಕೊಂಡ ಶಮೋದ ಶೆಟ್ಟಿ ಕುಟುಂಬದ ಮಾನವೀಯ ಕಾರ್ಯ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ.

ದಾಸ ಸಾಹಿತ್ಯದ ಅರಿವು ಮೂಡಿಸುವುದೇ ಸೌರಭ ವಿದ್ಯಾಲಯದ ಗುರಿ

ಬೇಲೂರಿನಲ್ಲಿ ದಶಮಾನೋತ್ಸವ ಅಭಿಯಾನ ಕಾರ್ಯಕ್ರಮ

ಪ್ರಜಾ ಭಾರತ ವರದಿ

ಬೇಲೂರು: ದಾಸ ಸಾಹಿತ್ಯ ಪರಂಪರೆ, ಆಚಾರ-ವಿಚಾರಗಳ ಕುರಿತು ಜನರಲ್ಲಿ ಅರಿವು ಮೂಡಿಸುವುದೇ ಸೌರಭ ದಾಸ ಸಾಹಿತ್ಯ ವಿದ್ಯಾಲಯದ ಮುಖ್ಯ ಗುರಿಯಾಗಿದೆ ಎಂದು ಕೊಪ್ಪಳದ ವಿದ್ಯಾಲಯದ ಅಧ್ಯಕ್ಷ ಹಾಗೂ ಪ್ರಾಂಶುಪಾಲ ಡಾ. ಪ್ರಮೋದ್ ಆಚಾರ್ಯ ಪೂಜಾರ್ ತಿಳಿಸಿದರು.

ಪಟ್ಟಣದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಪ್ರವಚನ ಮಂದಿರದಲ್ಲಿ ವಿದ್ಯಾಲಯದ ದಶಮಾನೋತ್ಸವ ಅಭಿಯಾನದ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆನ್‌ಲೈನ್ ಮೂಲಕ ಪಾಠಪ್ರವಚನ ನೀಡಲಾಗುತ್ತಿದ್ದು, ವಿಶ್ವದಾದ್ಯಂತ ಏಕಕಾಲದಲ್ಲಿ ಪರೀಕ್ಷೆ ನಡೆಸಲಾಗುತ್ತದೆ. ನಮ್ಮ ಪರಂಪರೆಯ ಯತಿಗಳು, ಹರಿದಾಸರು ಹಾಗೂ ದಾಸಿಯರ ಪರಿಚಯ ಮತ್ತು ಸಾಧನೆಗಳನ್ನು ಜನಸಾಮಾನ್ಯರಿಗೆ ತಿಳಿಸುವುದು ವಿದ್ಯಾಲಯದ



ಉದ್ದೇಶವಾಗಿದೆ ಎಂದರು.

ಮುಖ್ಯ ಅತಿಥಿ ಸಾಹಿತಿ ಹಾಗೂ ಸಂಶೋಧಕ ಡಾ. ಶ್ರೀವತ್ಸ ಎಸ್. ವಟಿ ಮಾತನಾಡಿ, ದಾಸ ಸಾಹಿತ್ಯದ ಪರಿಚಯಕ್ಕೆ ವಿದ್ಯಾಲಯ ನಡೆಸುತ್ತಿರುವ ಪ್ರಯತ್ನ ಶ್ಲಾಘನೀಯ. ಇಂತಹ ಕಾರ್ಯಕ್ರಮಗಳು ಸಾಹಿತ್ಯಿಕ ಜ್ಞಾನವೃದ್ಧಿಗೆ ಸಹಕಾರಿಯಾಗಿವೆ ಎಂದರು.

ಮಠದ ವ್ಯವಸ್ಥಾಪಕ ಸುಧೀಂದ್ರ ಆಚಾರ್ಯ ಸೇರಿದಂತೆ ಹಲವು ಗಣ್ಯರು ಮಾತನಾಡಿದರು. ಕಾರ್ಯಕ್ರಮದಲ್ಲಿ ವಿವಿಧ ವರ್ಗಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ಹಾಗೂ ದಾಸ ಶಿರೋಮಣಿ ವರ್ಗದಲ್ಲಿ ಸಾಧನೆ ಮಾಡಿದವರಿಗೆ ರಜತ ಪದಕ ವಿತರಿಸಲಾಯಿತು. ವಿದ್ಯಾರ್ಥಿಗಳು ಡಾ. ಪ್ರಮೋದ್ ಆಚಾರ್ಯ ಅವರಿಗೆ ಗುರುವಂದನೆ ಸಲ್ಲಿಸಿ ಸನ್ಮಾನಿಸಿದರು.

ವಿದ್ಯಾಲಯದ ಸಂಚಾಲಕ ವಾಸುದೇವ ಧನ್ಯ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.



ಪ್ರಜಾ ಭಾರತ ವರದಿ

ಹಾಸನ: ಸಿಂಹಾಸನಪುರಿ ಆಟೋ ರಿಕ್ಷಾ ಚಾಲಕರ ಸಂಘ ಮತ್ತು ಟ್ರಸ್ಟ್ ವತಿಯಿಂದ ನಗರದ ಹಳೆ ಬಸ್ ನಿಲ್ದಾಣದಲ್ಲಿ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು.

ಸಮಾಜಮುಖಿ ಸೇವಾ ಕಾರ್ಯಗಳಿಗೆ ಆದ್ಯತೆ ನೀಡುವ ಉದ್ದೇಶದಿಂದ ಹಮ್ಮಿಕೊಂಡಿದ್ದ ಈ ಶಿಬಿರದಲ್ಲಿ ರಕ್ತದಾನದ ಮಹತ್ವದ ಕುರಿತು ಜಾಗೃತಿ ಮೂಡಿಸಲಾಯಿತು. ತುರ್ತು ಸಂದರ್ಭಗಳಲ್ಲಿ ರಕ್ತದ ಕೊರತೆಯಿಂದ ಯಾವುದೇ ಜೀವಕ್ಕೆ ತೊಂದರೆಯಾಗಬಾರದು ಎಂಬ ಆಶಯದೊಂದಿಗೆ ಸಂಘದ ವತಿಯಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಪಾಲ್ಗೊಂಡು ಶಿಬಿರದ ಯಶಸ್ಸಿಗೆ ಸಹಕರಿಸಿದರು. ರಕ್ತದಾನವು ಮತ್ತೊಬ್ಬರ ಜೀವ ಉಳಿಸುವ ಮಹತ್ವದ ಮಾನವೀಯ ಸೇವೆಯಾಗಿದ್ದು, ಪ್ರತಿಯೊಬ್ಬರೂ ಇಂತಹ ಸಮಾಜಮುಖಿ ಕಾರ್ಯಗಳಲ್ಲಿ ಕೈಜೋಡಿಸಬೇಕು ಎಂಬ ಸಂದೇಶವನ್ನು ಈ ಸಂದರ್ಭದಲ್ಲಿ ಸಾರಲಾಯಿತು. ಸಿಂಹಾಸನಪುರಿ ಆಟೋ ರಿಕ್ಷಾ ಚಾಲಕರ ಸಂಘ ಮತ್ತು ಟ್ರಸ್ಟ್‌ನ ಈ ಕಾರ್ಯಕ್ಕೆ ಸಾರ್ವಜನಿಕ ವಲಯದಲ್ಲಿ ಮೆಚ್ಚುಗೆ ವ್ಯಕ್ತವಾಯಿತು. ಆಟೋ ಚಾಲಕರು ತಮ್ಮ ವೃತ್ತಿಯ ಜೊತೆಗೆ ಸಾಮಾಜಿಕ ಸೇವೆಯಲ್ಲಿಯೂ ತೊಡಗಿಸಿಕೊಳ್ಳುವ ಮೂಲಕ ಸಮಾಜಕ್ಕೆ ಮಾದರಿಯಾಗಿದ್ದಾರೆ.

ಕಾರ್ಯಕ್ರಮದಲ್ಲಿ ಶಾಸಕ ಹೆಚ್.ಪಿ. ಸ್ವರೂಪ್, ಸಮಾಜ ಸೇವಕ ಕಂಚಮಾರನಹಳ್ಳಿ ಕಾಂತರಾಜು, ಸಿಂಹಾಸನಪುರಿ ಆಟೋ ರಿಕ್ಷಾ ಚಾಲಕರ ಸಂಘ ಅಧ್ಯಕ್ಷ ದಿಲೀಪ್, ಉಪಾಧ್ಯಕ್ಷ ಆನಂದ್, ಖಜಾಂಚಿ ರಾಘವೇಂದ್ರ, ಪ್ರಧಾನ ಕಾರ್ಯದರ್ಶಿ ಹರೀಶ್, ಮಧು, ನಾಗಚಾರಿ, ಕುಮಾರ್, ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು ಮತ್ತು ಆಟೋಚಾಲಕರು ಉಪಸ್ಥಿತರಿದ್ದರು.

ರೋಟರಿ ವಲಯ-9ರ 'ಸಾಂಸ್ಕೃತಿಕ ಪರ್ವ' ಯಶಸ್ವಿ



ಪ್ರಜಾ ಭಾರತ ವರದಿ

ಹಾಸನ: ರೋಟರಿ ಕ್ಲಬ್ ಆಫ್ ಹಾಸನ್ ಸನ್‌ರೈಸ್ ಆತಿಥ್ಯದಲ್ಲಿ ಹಾಸನದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಅಕ್ಟೋಬರ್ 25ರಂದು ಆಯೋಜಿಸಿದ್ದ ರೋಟರಿ ವಲಯ-9ರ 'ಸಾಂಸ್ಕೃತಿಕ ಪರ್ವ 2026-27' ಕಾರ್ಯಕ್ರಮ ಅದ್ಧೂರಿಯಾಗಿ ನಡೆಯಿತು.

ಕಾರ್ಯಕ್ರಮವನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಎಚ್. ಎಲ್. ಮಲ್ಲೇಶ್ ಗೌಡ ಉದ್ಘಾಟಿಸಿದರು. ವಲಯದ ವಿವಿಧ ರೋಟರಿ ಕ್ಲಬ್‌ಗಳ ಸದಸ್ಯರು ಗಾಯನ, ನೃತ್ಯ, ಸಮೂಹ ಗಾಯನ ಹಾಗೂ ನಾಟಕ ಸೇರಿದಂತೆ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಿ ಪ್ರತಿಭೆ ಪ್ರದರ್ಶಿಸಿದರು.

ಸಹಾಯಕ ಗವರ್ನರ್ ರೋಟೇರಿಯನ್ ಮಂಜುನಾಥ್, ವಲಯ ನಾಯಕ ಡಾ. ತೇಜಸ್ವಿ, ಮಾಜಿ ಜಿಲ್ಲಾ ಗವರ್ನರ್‌ಗಳಾದ ಬಿ.ಎನ್. ರಮೇಶ್ ಮತ್ತು ಪಾಲಾಕ್ಷ ಸೇರಿದಂತೆ ವಿವಿಧ ಕ್ಲಬ್‌ಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಕ್ಲಬ್ ಅಧ್ಯಕ್ಷ ರೋಟೇರಿಯನ್ ಯೋಗೇಶ್ ಕೆ.ಎಸ್. ನೇತೃತ್ವದಲ್ಲಿ ವಲಯ ಸಾಂಸ್ಕೃತಿಕ ಸಂಯೋಜಕ ವಜ್ರಕುಮಾರ್ ಎಚ್.ಡಿ., ಕಾರ್ಯಕ್ರಮದ ಅಧ್ಯಕ್ಷ ಸಿದ್ದನಂಜಪ್ಪ ಹಾಗೂ ವಿವಿಧ ಪದಾಧಿಕಾರಿಗಳು ಮತ್ತು ಸದಸ್ಯರು ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದರು.

ಸಾಂಸ್ಕೃತಿಕ ಪರ್ವವು ರೋಟರಿ ಸದಸ್ಯರ ಪ್ರತಿಭೆ ಅನಾವರಣಗೊಳಿಸುವುದರ ಜತೆಗೆ ವಿವಿಧ ಕ್ಲಬ್‌ಗಳ ನಡುವೆ ಸ್ನೇಹ, ಸೌಹಾರ್ದತೆ ಮತ್ತು ಪರಸ್ಪರ ಸಹಕಾರವನ್ನು ಬಲಪಡಿಸಿತು. ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದ ಎಲ್ಲರಿಗೂ ಸನ್‌ರೈಸ್ ತಂಡ ಕೃತಜ್ಞತೆ ಸಲ್ಲಿಸಿತು.

ಹಾಸನದ ಮಲ್ನಾಡ್ ಎಂಜಿನಿಯರಿಂಗ್ ಕಾಲೇಜಿನಲ್ಲಿ ಅ.31ರಂದು 16ನೇ ಪದವಿ ಪ್ರದಾನ ಸಮಾರಂಭ

ಹಾಸನ: ನಗರದ ಮಲ್ನಾಡ್ ಎಂಜಿನಿಯರಿಂಗ್ ಕಾಲೇಜಿನಲ್ಲಿ ಅಕ್ಟೋಬರ್ 31ರಂದು 16ನೇ ಪದವಿ ಪ್ರದಾನ ಸಮಾರಂಭ ಆಯೋಜಿಸಲಾಗಿದೆ. ಕಾಲೇಜಿನ 2022-2026ನೇ ಸಾಲಿನ ಬಿ.ಇ. ಮತ್ತು ಎಂ.ಟೆಕ್ ಪದವೀಧರರಿಗೆ ಪದವಿ ಪ್ರದಾನ ಮಾಡುವ ಈ ಸಮಾರಂಭವು ಮಧ್ಯಾಹ್ನ 2 ಗಂಟೆಗೆ ಕಾಲೇಜಿನ ಸಭಾಂಗಣದಲ್ಲಿ ನಡೆಯಲಿದೆ.

ಮಲ್ನಾಡ್ ಟೆಕ್ನಿಕಲ್ ಎಜುಕೇಶನ್ ಸೊಸೈಟಿ ಆಶ್ರಯದಲ್ಲಿ ನಡೆಯಲಿರುವ ಈ ಸಮಾರಂಭಕ್ಕೆ ಬೆಂಗಳೂರಿನ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್‌ನ ಅಧ್ಯಕ್ಷರು ಮತ್ತು ವ್ಯವಸ್ಥಾಪಕ ನಿರ್ದೇಶಕ ರವಿ ಕೆ. ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಇ-ಬಾಕ್ಸ್ ಪದವಿ ಕಾರ್ಯಕ್ರಮದ ಚಾನ್ಸಲರ್ ಹಾಗೂ ಆಂಫಿವೆಂಚರ್ಸ್‌ನ ನಿರ್ದೇಶಕ ಮತ್ತು ಸಲಹೆಗಾರ, ಅಲಹಾಬಾದ್‌ನ ಐಐಐಟಿಯ ಮಾಜಿ ನಿರ್ದೇಶಕ ಹಾಗೂ ವಿಜ್ಞಾನ ವಿಶ್ವವಿದ್ಯಾಲಯದ ಮಾಜಿ ಕುಲಪತಿ ಡಾ. ಪಿ. ನಾಗಭೂಷಣ್ ಗೌರವಾನ್ವಿತ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ.

ಕರ್ನಾಟಕ ಹೈಕೋರ್ಟ್‌ನ ಹಿರಿಯ ವಕೀಲರು ಹಾಗೂ ಎಂಸಿಇ ಆಡಳಿತ ಮಂಡಳಿಯ ಮುಖ್ಯ ಪೋಷಕರಾದ ಅಶೋಕ್ ಹಾರನಹಳ್ಳಿ ಮತ್ತು ಮಲ್ನಾಡ್ ಟೆಕ್ನಿಕಲ್ ಎಜುಕೇಶನ್ ಸೊಸೈಟಿಯ ಅಧ್ಯಕ್ಷ ಬಿ.ಆರ್. ಗುರುದೇವ್ ಉಪಸ್ಥಿತರಿರಲಿದ್ದಾರೆ.

Printed, Published & Owned By Dinesh B G and Printed at Honalu Graphic, Word No. 2, Ashok Road Behind Stadium, Satyamangala Village, Vidya Nagara Hassan District, Karnataka - 573201 and Published at Ward No.1 Behind Budda School, Halebeedu Road Shanthi Nagara Bantenahalli Belur Taluk Hassan Dist, Karnataka - 573115 - Editor Dinesh B G